1046 (1089) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ರಾಜ್ಯಾದ್ಯಾಂತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕೊರಡಿಗಳ ಸಂಖ್ಯೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ ಹೆಚ್ಚು ಕೊರಡಿಗಳ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು,

ಇ) 2005–06ನೇ ಸಾಲಿನಲ್ಲಿ ಎಷ್ಟು ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳನ್ನು ಸ್ಥಾಪಿಸಲಾಗುವುದು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ

ಆ) 2006–07ನೇ ಸಾಲಿನಲ್ಲಿ ಪ್ರಾಥಮಿಕ ಶಾಲೆಗಳಿಗೆ ಸರ್ವಶಿಕ್ಷಣ ಅಭಿಯಾನ ಯೋಜನೆಯಡಿ ರೂ 375 02 ಕೋಟಿ ವೆಚ್ಚದಲ್ಲಿ 743 ಪ್ರಾಥಮಿಕ ಶಾಲಾ ಕಟ್ಟಡಗಳು ಮತ್ತು 13,625 ಹೆಚ್ಚುವರಿ ಪ್ರಾಥಮಿಕ ಶಾಲಾ ಕೊರಡಿಗಳನ್ನು ನಿರ್ಮಿಸಲು ಈಗಾಗಲೇ ಅನುದಾನ ಬಿಡುಗಡೆ ಮಾಡಿದ್ದು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ

2006–07ನೇ ಸಾಲಿನಲ್ಲಿ ನಬಾರ್ಡ್ ಯೋಜನೆಯ ಆರ್ ಐ ಡಿ ಎಫ್–10ರಡಿ ರೂ 37 82 ಕೋಟಿ ಮತ್ತು ಯೋಜನೆ ಹಾಗೂ ಯೊಜನೇತರದಡಿ ರೂ 9 06 ಕೋಟಿ ವೆಚ್ಚದಲ್ಲಿ ಪ್ರೌಢಶಾಲಾ ಕೊರಡಿಗಳ ನಿರ್ಮಾಣವನ್ನು ಕೈಗೆತ್ತಿಕೊಳ್ಳಲಾಗಿದೆ

ನಬಾರ್ಡ್ ಯೋಜನೆಯ ಆರ್ ಐ ಡಿ ಎಫ್–12 ರಡಿ ರೂ 100 00 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪ್ರೌಢ ಶಾಲಾ ಕೊರಡಿಗಳನ್ನು ನಿರ್ಮಿಸಲು ಅನುಮೋದನೆ ದೊರೆತಿದ್ದು, ಶೀಘ್ರದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು

ಇ) 2005–06ನೇ ಸಾಲಿನಲ್ಲಿ ಪ್ರಾಥಮಿಕ ಶಾಲೆಗಳಿಗೆ ಕೇಂದ್ರ ಸರ್ಕಾರದಿಂದ ಮಂಜೂರಾತಿ ದೊರೆಯದ ಕಾರಣ ಸರ್ವ ಶಿಕ್ಷಣ

ಅಭಿಯಾನದಡಿ ಯಾವುದೇ ಹೊಸ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಸ್ಥಾಪಿಸಿಲ್ಲ 2005–06ನೇ ಸಾಲಿನಲ್ಲಿ 126 ಸರ್ಕಾರಿ ಪ್ರೌಢಶಾಲೆಗಳನ್ನು ಸ್ಥಾಪಿಸಲಾಗಿದೆ

1047 (1090) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ವಸತಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಕರ್ನಾಟಕ ಗೃಹ ನಿರ್ಮಾಣ ಮಂಡಳಿ ವತಿಯಿಂದ ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ,

ಆ) ಎಷ್ಟು ಹೊಸ ಬಡಾವಣೆಗಳನ್ನು ನಿರ್ಮಾಣ ಮಾಡಲು ಸರ್ಕಾರ ತೀರ್ಮಾನ ಮಾಡಿದೆ,

ಇ) ಬೆಂಗಳೂರು ನಗರದಲ್ಲಿ ಎಷ್ಟು ಹೊಸ ಬಡಾವಣೆಗಳನ್ನು ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿರ್ಮಾಣ ಮಾಡಲು ಕ್ರಮ ಕೈಗೊಂಡಿದೆ,

ಈ) ಯಾವ ಯಾವ ಸ್ಥಳಗಳಲ್ಲಿ ನಿರ್ಮಾಣ ಮಾಡಲು ತೀರ್ಮಾನಿಸಲಾಗಿದೆ,

ಉ) 2005–06ನೇ ಸಾಲಿನಲ್ಲಿ ಗ್ರಾಮೀಣ ಆಶ್ರಯ ಯೋಜನೆಯಡಿ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ, ಇದಕ್ಕಾಗಿ ಎಷ್ಟು ಹಣವನ್ನು ಒದಗಿಸಲಾಗಿದೆ,

ಊ) 2005–06ನೇ ಸಾಲಿನಲ್ಲಿ ನಗರ ಪ್ರದೇಶದಲ್ಲಿ ಎಷ್ಟು ಆಶ್ರಯ ಮನೆಗಳನ್ನು ನಿರ್ಮಾಣ ಮಾಡಲಾಗಿದೆ (ಗ್ರಾಮೀಣ ಪ್ರದೇಶದ ಹಾಗೂ ನಗರ ಪ್ರದೇಶದ ಸಂಪೂರ್ಣ ವಿವರ ನೀಡುವುದು)?

ಶ್ರೀ ಡಿ ಟಿ ಜಯಕುಮಾರ್ (ವಸತಿ ಸಚಿವರು)

ಅ) ಕರ್ನಾಟಕ ಗೃಹ ಮಂಡಳಿ ವತಿಯಿಂದ ವಿವಿಧ ವರ್ಗದ ಒಟ್ಟು 72,175 ಮನೆಗಳನ್ನು ಈವರೆಗೆ ನಿರ್ಮಿಸಲಾಗಿರುತ್ತದೆ

ಆ) ಕರ್ನಾಟಕ ಗೃಹ ಮಂಡಳಿಯಿಂದ 100 ವಸತಿ ಯೋಜನೆಯಡಿಯಲ್ಲಿ ಈಗಾಗಲೇ 60 ಹೊಸ ಬಡಾವಣೆಗಳನ್ನು ನಿರ್ಮಿಸಿದ್ದು, ಇನ್ನು 40 ಹೊಸ ಬಡಾವಣೆಗಳನ್ನು ನಿರ್ಮಿಸಲು ತೀರ್ಮಾನಿಸಲಾಗಿರುತ್ತದೆ